Akashvani : Bangalore
National Bulletin In Kannada
26.06.2024: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.06.2024: 13.10hrs

ಮುಖ್ಯಾಂಶಗಳು

1. **ಲೋಕಸಭೆಯ ನೂತನ ಸ್ಪೀಕರ್ ಆಗಿ ಓಂ ಬಿರ್ಲಾ ಪದಗ್ರಹಣ; ಪ್ರಧಾನಿ ಸೇರಿ ಗಣ್ಯರ ಅಭಿನಂದನೆ**
2. **ಲೋಕಸಭೆ ಉಪ ಸಭಾಧ್ಯಕ್ಷರ ಆಯ್ಕೆ ವಿಚಾರದಲ್ಲಿ ಕಾಂಗ್ರೆಸ್ ಪಕ್ಷ ಷರತ್ತು ವಿಧಿಸುವುದು ಸರಿಯಲ್ಲ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**
3. **ಟೋಲ್‌ಗಳಲ್ಲಿ ಗುಣಮಟ್ಟದ ಸೇವೆ ಅಗತ್ಯ- ಕೇಂದ್ರ ಸಚಿವ ನಿತಿನ್ ಗಡ್ಕರಿ**
4. **ಇಂದು ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ; ಎಲ್ಲೆಡೆ ಜನಜಾಗೃತಿ**

*****

೧೮ನೇ ಲೋಕಸಭೆಯ ನೂತನ ಸ್ಪೀಕರ್ ಆಗಿ ಓಂ ಬಿರ್ಲಾ ಪದಗ್ರಹಣ ಮಾಡಿದರು. ಸ್ಪೀಕರ್ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಯಾದ ಓಂ ಬಿರ್ಲಾ ಅವರ ಹೆಸರನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಸೂಚಿಸಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಎರಡನೇ ಸೂಚಕರಾಗಿ ಓಂ ಬಿರ್ಲಾ ಅವರ ಹೆಸರನ್ನು ಪ್ರಸ್ತಾಪಿಸಿದರು. ನಂತರ ಪ್ರಧಾನಿ ನರೇಂದ್ರ ಮೋದಿ, ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು, ನೂತನ ಸ್ಪೀಕರ್ ಅವರನ್ನು ಅವರ ಸ್ಥಾನಕ್ಕೆ ಕರೆ ತಂದರು. ಸದಸ್ಯರ ಹರ್ಷೋದ್ಗಾರ ಹಾಗೂ ಕರತಾಡನಗಳ ನಡುವೆ ಸ್ಪೀಕರ್ ಸ್ಥಾನದಲ್ಲಿ ಆಸೀನರಾದರು. ಎರಡನೇ ಬಾರಿಗೆ ಅವರು, ಲೋಕಸಭಾಧ್ಯಕ್ಷರಾಗಿ ಆಯ್ಕೆಯಾಗಿರುವುದು ವಿಶೇಷವಾಗಿದೆ. ಬಳಿಕ ಪ್ರಧಾನಿ ನರೇಂದ್ರ ಮೋದಿ ಮಾತನಾಡಿ, ಮೊದಲ ಅವಧಿಯಲ್ಲಿ ತಾವು ಸ್ಪೀಕರ್ ಸ್ಥಾನವನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸಿದ್ದೀರಿ. ಕೋವಿಡ್ ಸಾಂಕ್ರಮಿಕ ಸಂದರ್ಭದಲ್ಲಿಯೂ ತಾವು ಅತ್ಯುತ್ತವಾಗಿ ಸದನವನ್ನು ಮುನ್ನೆಡೆಸಿದ್ದೀರಿ. ಸದನದ ಸತ್‌ಸಂಪ್ರದಾಯಗಳನ್ನು ಎತ್ತಿ ಹಿಡಿದ್ದೀರಿ. ೧೮ನೇ ಲೋಕಸಭೆಯನ್ನು ಸೂಕ್ತ ರೀತಿಯಲ್ಲಿ ನಿಭಾಯಿಸುವ ವಿಶ್ವಾಸವಿದೆ ಎಂದರು. ನಂತರ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಹಂಗಾಮಿ ಸಭಾಧ್ಯಕ್ಷರಾಗಿ ಭತೃಹರಿ ಮೆಹತಾ ಅವರು, ಸ್ಪೀಕರ್ ಚುನಾವಣೆಯನ್ನು ನಿಯಮ ಬದ್ಧವಾಗಿ ನಡೆಸಿದ್ದಾರೆ. ತಮ್ಮ ಜವಾಬ್ದಾರಿಯನ್ನು ಸೂಕ್ತ ರೀತಿಯಲ್ಲಿ ನಿಭಾಯಿಸಿದ್ದಾರೆ ಎಂದರು. ರಾಹುಲ್‌ಗಾಂಧಿ ಮಾತನಾಡಿ, ಸಭಾಧ್ಯಕ್ಷರಿಗೆ ಸದನ ನಡೆಸಲು ಸೂಕ್ತ ರೀತಿಯಲ್ಲಿ ನೆರವಾಗುತ್ತೇವೆ. ಪ್ರತಿಪಕ್ಷಗಳಿಗೂ ಸದನದಲ್ಲಿ ಧ್ವನಿ ಇರುವಂತೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು.

*****

ಲೋಕಸಭೆಯ ಉಪ ಸಭಾಧ್ಯಕ್ಷರ ಚುನಾವಣೆ ವಿಚಾರದಲ್ಲಿ ಕಾಂಗ್ರೆಸ್, ಷರತ್ತು ವಿಧಿಸುವುದು ಸಲ್ಲದು ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ, ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಸಂಸತ್ ಭವನದ ಹೊರಭಾಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ ಸಭಾಧ್ಯಕ್ಷರ ವಿಚಾರದಲ್ಲೂ ಸರ್ಕಾರ, ಚರ್ಚೆ ಸಿದ್ಧವಿದೆ. ಆದರೆ, ಪೂರ್ವ ಷರತ್ತು ವಿಧಿಸುವುದು ಸೂಕ್ತವಲ್ಲ ಎಂದರು. ಈ ಮಧ್ಯೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸ್ಪೀಕರ್ ಸ್ಥಾನದ ವಿಚಾರದಲ್ಲಿ ಸರ್ಕಾರ ಮತ್ತು ಪ್ರತಿಪಕ್ಷಗಳ ನಡುವೆ ಯಾವುದೇ ಚರ್ಚೆ ನಡೆದಿರಲಿಲ್ಲ. ಚುನಾವಣೆ ಘೋಷಣೆಯಾದ ಕಾರಣ ನಮ್ಮ ಮೈತ್ರಿಕೂಟದಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗಿದೆ ಎಂದು ಹೇಳಿದರು.

*****

ಹೆದ್ದಾರಿಗಳ ಟೋಲ್‌ಗಳಲ್ಲಿ ಟೋಲ್ ಸಂಗ್ರಹಕ್ಕೆ ಗ್ಲೋಬಲ್ ನ್ಯಾವಿಗೇಷನ್ ಸೆಟಲೈಟ್ ಸಿಸ್ಟಮ್, ಪರಿಣಾಮಕಾರಿ ಹಾಗೂ ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಕೇಂದ್ರ ಭೂಸಾರಿಗೆ ಹಾಗೂ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ದೆಹಲಿಯಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಟೋಲ್ ಪಾವತಿ ನೈತಿಕತೆ ಮತ್ತು ಆರ್ಥಿಕ ಮಹತ್ವ ಪಡೆದುಕೊಂಡಿದ್ದು, ಈ ವಲಯದಲ್ಲಿ ಗುಣಮಟ್ಟದ ಸೇವೆ ಅತ್ಯಂತ ಅಗತ್ಯವಾಗಿದೆ. ಈ ಕ್ಷೇತ್ರದಲ್ಲಿ ವ್ಯವಸ್ಥೆಯನ್ನು ಸುಧಾರಿಸಲು ವರ್ತನೆಯಲ್ಲೂ ಸಹ ಬದಲಾವಣೆಯಾಗಬೇಕಾಗಿದೆ. ವಾಹನ ಸವಾರರು ಮಾಸಿಕ ಪಾಸ್‌ಗಳನ್ನು ಪಡೆದು ಸಂಚರಿಸಿದರೆ, ವ್ಯವಸ್ಥೆ ಮತ್ತಷ್ಟು ಸುಧಾರಿಸಲಿದೆ ಎಂದು ಹೇಳಿದರು.

*****

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ನಿನ್ನೆ ದೆಹಲಿಯಲ್ಲಿ ಬಜೆಟ್ ಪೂರ್ವಭಾವಿ ಸಭೆ ನಡೆಸಿದರು. ಈ ಮೂಲಕ ಅವರು, ಸಮಾಲೋಚನೆ ಪ್ರಕ್ರಿಯೆಯನ್ನು ಮುಂದುವರಿಸಿದ್ದಾರೆ. ವ್ಯಾಪಾರ ಮತ್ತು ಸೇವಾ ವಲಯದ ಪ್ರತಿನಿಧಿಗಳಿಂದ ಅಹವಾಲು ಸ್ವೀಕರಿಸಿದರು. ಇದಕ್ಕೂ ಮುನ್ನ ಸಚಿವರು, ಉದ್ಯೋಗ ಮತ್ತು ಕೌಶಾಲ್ಯಾಭಿವೃದ್ಧಿ ವಲಯದ ಪರಿಣಿತರ ಜೊತೆಯೂ ಸಮಾಲೋಚಿಸಿದರು. ಕಳೆದ ವಾರ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರ ಜೊತೆ ಚರ್ಚೆ ನಡೆಸಿದ್ದರು.

*****

ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ, ನವ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ಅಂತಾರಾಷ್ಟ್ರೀಯ ಸಕ್ಕರೆ ಸಂಸ್ಥೆಯ ಮೂರು ದಿನಗಳ ೬೪ನೇ ಮಂಡಳಿ ಸಭೆ ಉದ್ಘಾಟಿಸಿದರು. ಕಬ್ಬು,

ಸಕ್ಕರೆ ಮತ್ತು ಸಂಬಂಧಿತ ಕ್ಷೇತ್ರಗಳಲ್ಲಿ ಭವಿಷ್ಯದ ಸಾಧ್ಯತೆಗಳು, ಸವಾಲುಗಳು ಮತ್ತು ಕಾರ್ಯತಂತ್ರಗಳ ಬಗ್ಗೆ ಚರ್ಚಿಸಲು ೩೦ಕ್ಕೂ ಹೆಚ್ಚು ದೇಶಗಳ ತಜ್ಞರು ಸಭೆಯಲ್ಲಿ ಭಾಗವಹಿಸಿದ್ದಾರೆ. ಇದಕ್ಕೂ ಮುನ್ನ ಭಾರತ ೨೦೧೨ ರಲ್ಲಿ ಐಎಸ್‌ಒ ಮಂಡಳಿ ಸಭೆಯ ೪೧ನೇ ಅಧಿವೇಶನವನ್ನು ಆಯೋಜಿಸಿತ್ತು. ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಸುಮಾರು ೫ ಕೋಟಿ ರೈತರು ಕಬ್ಬಿನ ಕೃಷಿಯಲ್ಲಿ ತೊಡಗಿದ್ದಾರೆ. ಈ ಉದ್ಯಮ ನೇರವಾಗಿ ಮತ್ತು ಪರೋಕ್ಷವಾಗಿ ಸಾಕಷ್ಟು ಉದ್ಯೋಗಾವಕಾಶಗಳನ್ನು ಒದಗಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಸರ್ಕಾರ ರೈತರ ಕಲ್ಯಾಣ, ಗ್ರಾಹಕರು ಮತ್ತು ಉದ್ಯಮದ ಹಿತಾಸಕ್ತಿಯನ್ನು ಕಾಪಾಡಲು ಹೆಚ್ಚಿನ ಆದ್ಯತೆ ನೀಡುತ್ತದೆ. ಈ ಮೂಲಕ ಕೃಷಿ ಪದ್ಧತಿಗಳನ್ನು ಸುಧಾರಿಸಲು ಸಹಯೋಗದ ಪ್ರಯತ್ನಗಳನ್ನು ಖಚಿತಪಡಿಸುತ್ತದೆ ಎಂದು ಹೇಳಿದರು.

*****

ಹಿಂದಿನ ಸರ್ಕಾರದ ಅವಧಿಯಲ್ಲಿ ವಿದ್ಯುತ್ ಖರೀದಿ ಒಪ್ಪಂದದಲ್ಲಿ ಆಗಿರುವ ಭ್ರಷ್ಟಾಚಾರ ಕುರಿತಂತೆ ತನಿಖೆ ನಡೆಸಲು ನೇಮಿಸಿರುವ ನ್ಯಾಯಮೂರ್ತಿ ಎಲ್.ನರಸಿಂಹ ರೆಡ್ಡಿ ಆಯೋಗದ ಪ್ರಕ್ರಿಯೆಗೆ ತಡೆ ನೀಡುವಂತೆ ಕೋರಿ ಬಿಆರ್‌ಎಸ್ ಪಕ್ಷದ ಅಧ್ಯಕ್ಷ ಕೆ.ಚಂದ್ರಶೇಖರ್ ರಾವ್, ಹೈಕೋರ್ಟ್ ಮೊರೆ ಹೋಗಿದ್ದಾರೆ. ಈ ಕುರಿತಂತೆ ಸಮಿತಿ ನೇಮಕವನ್ನು ಪ್ರಶ್ನಿಸಿ ಅವರು, ಕಾನೂನು ಹೋರಾಟಕ್ಕೆ ಅಣಿಯಾಗಿದ್ದಾರೆ.

*****

ಇಂದು ಅಂತಾರಾಷ್ಟ್ರೀಯ, ಮಾದಕ ವ್ಯಸನ ಹಾಗೂ ಮಾದಕ ವಸ್ತುಗಳ ಅಕ್ರಮ ಸಾಗಾಟ ವಿರೋಧಿ ದಿನ. ೧೯೮೭ ಡಿಸೆಂಬರ್ ೭ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜೂನ್ ೨೬ ಅನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನ ಎಂದು ಘೋಷಿಸಲಾಯಿತು. ಕಳಂಕ ಮತ್ತು ತಾರತಮ್ಯ ನಿಲ್ಲಿಸಿ, ವ್ಯಸನ ಮುಕ್ತತೆಯ ಕ್ರಮಗಳನ್ನು ಬಲಗೊಳಿಸಿ ಎಂಬುದು ಈ ಬಾರಿಯ ಘೋಷ ವಾಕ್ಯವಾಗಿದೆ. ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನು ಬಾಹಿರ ಎಂಬ ಅರಿವಿದ್ದರೂ ಈ ಪಿಡುಗನ್ನು ನಿಯಂತ್ರಿಸುವ ಸವಾಲು ಎಲ್ಲ ರಾಷ್ಟ್ರಗಳಿಗೂ ಎದುರಾಗಿದೆ. ಡ್ರಗ್ ಮಾಫಿಯಾ ಹತೋಟಿಗೆ ತರಲು ವಿಶ್ವದೆಲ್ಲೆಡೆ ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬುಡ ಸಮೇತ ಕಿತ್ತು ಹಾಕಲು ಸಾಧ್ಯವಾಗಿಲ್ಲ. ಪ್ರತಿಯೊಬ್ಬ ನಾಗರಿಕನೂ ಈ ಬಗ್ಗೆ ಜಾಗೃತಿ ಹೊಂದಿ ವಿಶ್ವವನ್ನು ಮಾದಕವಸ್ತುಗಳಿಂದ ಮುಕ್ತವಾಗಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಜಗತ್ತಿನಾದ್ಯಂತ ಇಂದು ಜನ ಜಾಗೃತಿ ಕಾರ್ಯಕ್ರಮ ಹಾಗೂ ಅಭಿಯಾನಗಳು ನಡೆಯುತ್ತಿವೆ. ಮಣಿಪುರದಲ್ಲಿ ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್, ಮೋಟರ್ ಬೈಕ್ ರ್‍ಯಾಲಿಗೆ ಚಾಲನೆ ನೀಡಿದರು. ದೇಶಾದ್ಯಂತ ಮಾದಕ ವಸ್ತುಗಳ ದುಷ್ಪರಿಣಾಮಗಳ

ಬಗ್ಗೆ ಅರಿವು ಮೂಡಿಸಲು ಇದೇ ತಿಂಗಳ ೧೨ ರಿಂದ ಈವರೆಗೆ ನಶೆಮುಕ್ತ ಭಾರತ ಸಪ್ತಾಹ ಆಯೋಜಿಸಲಾಗಿತ್ತು.

*****

ತಂಬಾಕು ಮತ್ತು ಮದ್ಯ, ಮಾನವನ ದೇಹಕ್ಕೆ ಮಾರಕವಾಗಿದ್ದು, ಕಾನೂನು ಬಾಹಿರವಾಗಿ ತಂಬಾಕು ಬೆಳೆಯುವ ಮತ್ತು ಮದ್ಯ ಉತ್ಪಾದನೆ ಮಾಡುವ ಜಾಲವನ್ನು ಪರಿಣಾಮಕಾರಿಯಾಗಿ ಹತ್ತಿಕ್ಕುವಂತೆ ವಿಶ್ವ ಆರೋಗ್ಯ ಸಂಘಟನೆ ತನ್ನ ಸದಸ್ಯ ರಾಷ್ಟ್ರಗಳಿಗೆ ಕರೆ ನೀಡಿದೆ. ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ವಲಯದಲ್ಲಿ ಭಾರತ ಮತ್ತು ಶ್ರೀಲಂಕಾ ದೇಶಗಳು ತಂಬಾಕು ನಿಯಂತ್ರಣ ಕುರಿತಂತೆ ವಿಶ್ವ ಆರೋಗ್ಯ ಸಂಸ್ಥೆಯ ಸಮಾವೇಶದಲ್ಲಿ ಸಾರಥ್ಯ ವಹಿಸಿದ್ದು, ಬ್ಯಾಂಕಾಕ್ ನಲ್ಲಿ ಈ ಸಂಬಂಧ ನಿನ್ನೆ ಕಾರ್ಯಾಗಾರ ನಡೆಯಿತು.

*****

ಸೌರಾಷ್ಟ್ರ, ಕಚ್, ಪಶ್ಚಿಮ ಮಧ್ಯಪ್ರದೇಶದಲ್ಲಿ ಇಂದು ಮತ್ತು ನಾಳೆ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಕರ್ನಾಟಕ, ಉತ್ತರ ಒಳನಾಡು, ತಮಿಳುನಾಡು, ಕೇರಳ, ತೆಲಂಗಾಣ, ಕರಾವಳಿ ಆಂಧ್ರಪ್ರದೇಶ, ವಿದರ್ಭ, ಪಶ್ಚಿಮ ಮಧ್ಯಪ್ರದೇಶ, ಪೂರ್ವ ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢದಲ್ಲಿ ಶುಕ್ರವಾರದವರೆಗೆ ಮತ್ತು ಗುಜರಾತ್‌ನಲ್ಲಿ ಇದೇ ೨೯ ರವರೆಗೆ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೫ ದಿನಗಳಲ್ಲಿ ಕೊಂಕಣ ಮತ್ತು ಗೋವಾ, ಮಧ್ಯ ಮಹಾರಾಷ್ಟ್ರ, ಮರಾಠವಾಡ, ಕರ್ನಾಟಕ, ಕೇರಳ ಮತ್ತು ಮಾಹೆ, ಲಕ್ಷದ್ವೀಪ, ಗುಜರಾತ್, ಮಧ್ಯಪ್ರದೇಶ, ವಿದರ್ಭ, ಛತ್ತೀಸ್‌ಗಢದಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವ. ಇದೇ ಅವಧಿಯಲ್ಲಿ ಕರಾವಳಿ ಆಂಧ್ರಪ್ರದೇಶ ಮತ್ತು ಯಾನಂ, ರಾಯಲಸೀಮಾ, ತೆಲಂಗಾಣ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಆದಾಗ್ಯೂ, ಜಮ್ಮು ವಿಭಾಗ, ಪಂಜಾಬ್ ಮತ್ತು ಪಶ್ಚಿಮ ರಾಜಸ್ಥಾನದ ಕೆಲವೆಡೆ ಬಿಸಿಗಾಳಿ ನಾಳೆಯವರೆಗೆ ಮುಂದುವರಿಯಲಿದ್ದು ನಂತರ ಕಡಿಮೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*****

ವಿಶ್ವಸಂಸ್ಥೆ ಸ್ಥಾಪನೆಯಾಗಿ ಮುಂದಿನ ವರ್ಷಕ್ಕೆ ೮೦ ವರ್ಷ ತುಂಬಲಿದ್ದು, ಇಂದಿನ ಜಾಗತಿಕ ಬಿಕ್ಕಟ್ಟುಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗುವಂತೆ ತನ್ನ ಶಾಶ್ವತ ಮತ್ತು ಶಾಶ್ವತೇತರ ವರ್ಗಗಳನ್ನು ವಿಸ್ತರಿಸುವ ಮೂಲಕ ಭದ್ರತಾ ಮಂಡಳಿಯ ಸುಧಾರಣೆಗೆ ಇದು ಸಕಾಲ ಎಂದು ಭಾರತ ಹೇಳಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭದ್ರತಾ ಮಂಡಳಿಯ ವಾರ್ಷಿಕ ವರದಿ ಕುರಿತ ಚರ್ಚೆಯ ವೇಳೆ ಭಾರತ, ಈ ಹೇಳಿಕೆ ನೀಡಿದೆ. ಇಂದಿನ ಜಾಗತಿಕ ಬಿಕ್ಕಟ್ಟಿನ ಸಮಯದಲ್ಲಿ ತನ್ನ ಶಾಶ್ವತ ಮತ್ತು ಶಾಶ್ವತೇತರ ವರ್ಗಗಳ ವಿಸ್ತರಣೆ ಎನ್ನುವುದು ಭದ್ರತಾ ಮಂಡಳಿಯ ಸಮಗ್ರ

ಸುಧಾರಣೆಗೆ ಮಾರ್ಗ ಎಂದು ಭಾರತ ನಂಬುವುದಾಗಿ ವಿಶ್ವಸಂಸ್ಥೆಗೆ ಭಾರತದ ಶಾಶ್ವತ ಅಭಿಯಾನದ ಪ್ರತಿನಿಧಿ ಪ್ರತೀಕ್ ಮಾಥೂರ್ ಹೇಳಿದ್ದಾರೆ.

*****

ಮುಂಬೈ ಷೇರು ಮಾರುಕಟ್ಟೆಯ ಆರಂಭಿಕ ವಹಿವಾಟಿನಲ್ಲಿಂದು ಷೇರು ಸಂವೇದಿ ಸೂಚ್ಯಂಕ ಸೆನ್ಸೆಕ್ಸ್ ೧೩೫ ಅಂಕ ಏರಿಕೆಯೊಂದಿಗೆ ೭೮ ಸಾವಿರದ ೧೮೮ರಲ್ಲಿ ವಹಿವಾಟು ನಡೆಸಿದೆ. ಅಂತೆಯೇ ನಿಫ್ಟಿ ಕೂಡ ೨೮ ಅಂಕ ಏರಿಕೆಯ ನಂತರ ೨೩ ಸಾವಿರದ ೭೪೯ ರಲ್ಲಿ ವಹಿವಾಟು ನಡೆಸಿತ್ತು. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ಪ್ರತಿ ಅಮೆರಿಕ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೩ ಪೈಸೆ ಇಳಿಕೆಯೊಂದಿಗೆ ೮೩ ರೂಪಾಯಿ ೪೬ ಪೈಸೆಯಷ್ಟಿದೆ.

*****

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯಲ್ಲಿ ನಾಳೆ ಬೆಳಗ್ಗೆ ಟ್ರಿನಿಡಾಡ್‌ನ ಟರೂಬಾದಲ್ಲಿರುವ ಬ್ರಿಯಾನ್ ಲಾರಾ ಕ್ರೀಡಾಂಗಣದಲ್ಲಿ ನಡೆಯಲಿರುವ ಮೊದಲ ಸೆಮಿಫೈನಲ್ಸ್‌ನಲ್ಲಿ ಅಫ್ಘಾನಿಸ್ತಾನ, ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ. ನಾಳೆ ಸಂಜೆ ಗಯಾನಾದ ಪ್ರಾವಿಡೆನ್ಸ್ ಸ್ಟೇಡಿಯಂನಲ್ಲಿ ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಫೈನಲ್ ಪಂದ್ಯದಲ್ಲಿ ಸ್ಥಾನಗಳಿಸಲು ಸೆಣಸಾಟ ನಡೆಸಲಿವೆ. ಟೂರ್ನಿಯ ಫೈನಲ್ ಪಂದ್ಯ ಬಾರ್ಬಡೋಸ್‌ನ ಬ್ರಿಡ್ಜ್‌ಟೌನ್‌ನ ಕೆನ್ಸಿಂಗ್ಟನ್ ಓವಲ್ ಕ್ರೀಡಾಂಗಣದಲ್ಲಿ ಇದೇ ೨೯ರಂದು ನಡೆಯಲಿದೆ. ಸೂಪರ್ ೮ರ ಘಟ್ಟದ ಪಂದ್ಯಗಳು ನಿನ್ನೆಗೆ ಸಮಾಪನಗೊಂಡಿದ್ದು, ಎರಡು ಗುಂಪುಗಳಿಂದ ತಲಾ ಅಗ್ರ ಎರಡು ತಂಡಗಳು ಸೆಮಿಫೈನಲ್ ಹಂತಕ್ಕೆ ಅರ್ಹತೆ ಪಡೆದುಕೊಂಡಿವೆ. ಗುಂಪು-೧ ರಿಂದ ಅಗ್ರಸ್ಥಾನದಲ್ಲಿ ಭಾರತ ಮತ್ತು ಎರಡನೇ ಸ್ಥಾನದಲ್ಲಿ ಅಫ್ಘಾನಿಸ್ತಾನ ಹಾಗೂ ಗುಂಪು-೨ರಿಂದ ಅಗ್ರಸ್ಥಾನದಲ್ಲಿ ದಕ್ಷಿಣ ಆಫ್ರಿಕಾ ಮತ್ತು ಎರಡನೇ ಸ್ಥಾನದಲ್ಲಿ ಇಂಗ್ಲೆಂಡ್, ಕೊನೆಯ ನಾಲ್ಕರ ಘಟ್ಟಕ್ಕೆ ಮುನ್ನಡೆದಿವೆ.

*****END****